<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಶಹಬಾದ</u>

**CC No : 2070/2021**

CW: 10 PW : 2

| | | |
|---|---|---|
| ಹೆಸರು | : | ಮೆಹತಾ ಪಟೇಲ್ |
| ತಂದೆಯ ಹೆಸರು | : | ಮಸ್ತಾನ ಪಟೇಲ್ |
| ವಯಸ್ಸು | : | 61 ವರ್ಷ |
| ಉದ್ಯೋಗ | : | ನಿವೃತ್ತ ಎ.ಎಸ್.ಐ |
| ಸ್ಥಳ | : | ಶಹಾಬಾದ |

**(ದಿನಾಂಕ: 02-11-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

<u>ಮುಖ್ಯ ವಿಚಾರಣೆ: ಸ.ಸ.ಅ ವಕೀಲರಿಂದ</u>

ನಾನು ದಿನಾಂಕ: 2018 ರಿಂದ ಜುಲೈ-2022 ರವರೆಗೆ ಶಹಾಬಾದ ಪೋಲೀಸ್ ಠಾಣೆಯಲ್ಲಿ ಎ.ಎಸ್.ಐ ಎಂದು ಕಾರ್ಯ ನಿರ್ವಹಿಸಿದ್ದೇನೆ. ದಿಃ 10-08-2020 ರಂದು ಚಾಸಾ-9 ರವರಿಂದ ಪ್ರಕರಣದ ಕಡತಗಳನ್ನು ಪಡೆದುಕೊಂಡು ಪರಿಶೀಲಿಸಿರುತ್ತೇನೆ. ಅದೇ ದಿನ ಎಫ್.ಎಸ್.ಎಲ್. ವರದಿಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿರುತ್ತೇನೆ. ದಿಃ 11-08-2020 ರಂದು ತನಿಖೆ ಪೂರ್ಣಗೊಂಡಿದ್ದು ಆರೋಪಿತನ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರ ಇರುವ ಕಾರಣ ಮಾನ್ಯ ನ್ಯಾಯಾಲಯಕ್ಕೆ ಕಲಂ 32, 34 ಕೆ, ಇ ಕಾಯ್ದೆ ಹಾಗೂ ಕಲಂ 273 ಐ. ಪಿ. ಸಿ ಅಡಿ ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿತನನ್ನು ನೋಡಿದರೆ ಗುರುತಿಸಬಲ್ಲೆ. ಆರೋಪಿತನು ನ್ಯಾಯಾಲಯದಲ್ಲಿ ಹಾಜರು ಇರುತ್ತಾನೆ. ಎಫ್. ಎಸ್. ಎಲ್. ವರದಿಯನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮುದ್ದೆ ಮಾಲನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ಮು.ಮಾ-1 ಎಂದು ಗುರುತಿಸಲಾಗಿದೆ.

<u>**ಪಾಟೀ ಸವಾಲು: ಆರೋಪಿ ಪರ ಶ್ರೀ ಸಿ. ಎಸ್. ಪಿ. ವಕೀಲರಿಂದ:**</u>

ದಿಃ 10-08-2020 ರಂದು ಚಾಸಾ-9 ರವರಿಂದ ಪ್ರಕರಣದ ಕಡತಗಳನ್ನು ಪಡೆದುಕೊಂಡು ಪರಿಶೀಲಿಸಿರುವುದಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-1 ರವರು ನನ್ನ ಮೇಲಾಧಿಕಾರಿಯಿರುವುದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಹಾಗೂ ಮುದ್ದೆ ಮಾಲುಗಳಿಗೆ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ಠಾಣಾ ಅಂಕಿ ಸಂಖ್ಯೆಗೋಸ್ಕರ ಖೊಟ್ಟಿ ಪ್ರಕರಣ ದಾಖಲಿಸಿದ್ದು, ಅದಕ್ಕೆ ಪೂರಕವಾಗಿ ಖೊಟ್ಟಿ ದೋಷಾರೋಪಣೆ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ.1 ಎಲ್ಲೆಂದರಲ್ಲಿ ಸಿಗುತ್ತವೆ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇರುವುದಿಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೆ. ಸರಿ ಇದೆ.**

**-Sd-**

**ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ.**

**ನ್ಯಾಯಾಧೀಶರು, ಶಹಬಾದ.**